**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರು ನಿಯಮ-330 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಸರ್ಕಾರದ ಉತ್ತರ.**

**ವಿಷಯ:-** ಮಂಡ್ಯ ಕ್ಯಾನ್ಸರ್ ಆಸ್ಪತ್ರೆಯಲ್ಲಿ ವೈದ್ಯರ ಮತ್ತು ಲ್ಯಾಬ್ ಟೆಕ್ನೀಷಿಯನ್‌ಗಳ ಕೊರತೆ, ಉಪಕರಣಗಳು ದುರಸ್ತಿಯಾಗಿರುವುದಲ್ಲದೆ ಅತೀವ ಮೂಲಭೂತಸೌಲಭ್ಯಗಳ ಕೊರತೆಯಿಂದ ರೋಗಿಗಳಿಗೆ ಸಕಾಲದಲ್ಲಿ ಚಿಕಿತ್ಸೆ ದೊರೆಯದೆ ತುಂಬಾ ತೊಂದರೆಗೀಡಾಗಿರುವ ಗಂಭೀರ ಸಮಸ್ಯೆ ಕುರಿತು.

******

**ಉತ್ತರ:-** ಮಂಡ್ಯ ಜಿಲ್ಲಾ ಆಸ್ಪತ್ರೆಯ ಆವರಣದಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ಕ್ಯಾನ್ಸರ್ ಕೇಂದ್ರವನ್ನು Teritiary Cancer Care ಕೇಂದ್ರವನ್ನಾಗಿ ಉನ್ನತೀಕರಿಸಿ 2007 ರಲ್ಲಿ ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ ವರ್ಗಾಯಿಸಿದ್ದು, ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆಯ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಸಿಬ್ಬಂದಿಗಳನ್ನು ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ ವಿಲೀನಗೊಳಿಸಲಾಗಿದೆ. ಆ ಪೈಕಿ ಒಬ್ಬರು ರೇಡಿಯೇಷನ್ ಅಂಕಾಲಿಜಿಸ್ಟ್, ಒಬ್ಬರು ಫಿಜಿಸಿಸ್ಟ್, ಲ್ಯಾಬ್ ಟೆಕ್ನಿಷಿಯನ್ಸ್-03 ಸಿಬ್ಬಂದಿಗಳಾಗಿದ್ದು, ಹಾಲಿ ರೇಡಿಯೇಷನ್ ಅಂಕಾಲಿಜಿಸ್ಟ್ ರವರು 2021 ರಲ್ಲಿ ನಿವೃತ್ತಿ ಹೊಂದಿರುತ್ತಾರೆ ಮತ್ತು ಫಿಜಿಸಿಸ್ಟ್ ಹುದ್ದೆಯಲ್ಲಿದ್ದ ಸಿಬ್ಬಂದಿಯು ಮೈಸೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಗೆ ವರ್ಗಾವಣೆ ಹೊಂದಿದ್ದರಿಂದ ಸದರಿ ಹುದ್ದೆಯು ಖಾಲಿ ಇರುತ್ತದೆ.

ಪ್ರಸ್ತುತ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ನಿಯೋಜಿತರಾದ ಶಸ್ತ್ರಚಿಕಿತ್ಸಕರು (ಸರ್ಜಿಕಲ್ ಅಂಕಾಲಜಿಸ್ಟ್) ಶಸ್ತ್ರಚಿಕಿತ್ಸೆ ಅಗತ್ಯವಿರುವ ಕ್ಯಾನ್ಸರ್‌ಪೀಡಿತ ರೋಗಿಗಳಿಗೆ ಶಸ್ತ್ರಚಿಕಿತ್ಸೆ ಮಾಡುತ್ತಿರುತ್ತಾರೆ.

ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಅಧೀನದಲ್ಲಿನ ಪೆರಿಫೆರಲ್ ಕ್ಯಾನ್ಸರ್ ಕೇರ್ ಕೇಂದ್ರಕ್ಕೆ ಬರುವ ರೋಗಿಗಳ ಚಿಕಿತ್ಸೆಯ ದೃಷ್ಟಿಯಿಂದ ಶ್ರೀಮತಿ ಮಹಿತಾ ಕೆ.ಸಿ, ರೇಡಿಯೇಷನ್ ಸೇಫ್ಟಿ ಆಫೀಸರ್, ಬೆಂಗಳೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ ಇವರನ್ನು ನಿಯೋಜನೆ ಮೇಲೆ ಮಂಡ್ಯ ಕ್ಯಾನ್ಸರ್ ಸಂಸ್ಥೆಗೆ ನೇಮಿಸಲಾಗಿದೆ

ವೈದ್ಯಾಧಿಕಾರಿಗಳು ಮತ್ತು ಇತರೆ ಹುದ್ದೆಗಳ ನೇಮಕಾತಿ ಬಗ್ಗೆ ಸಂಸ್ಥೆಯ ಆಡಳಿತ ಪರಿಷತ್ ಸಭೆಯಲ್ಲಿ ನಿರ್ಣಯಿಸಿದಂತೆ ಬೋಧಕ ವೃಂದದ 29 ಹುದ್ದೆಗಳು ಹಾಗೂ ಬೋಧಕೇತರ ವೃಂದದ 190 ಹುದ್ದೆಗಳು ಸೇರಿದಂತೆ ಒಟ್ಟು 219 ಹುದ್ದೆಗಳನ್ನು ಸೃಜಿಸಲು ಕ್ರಮವಹಿಸಲಾಗುತ್ತಿದ್ದು, ಆರ್ಥಿಕ ಇಲಾಖೆಯ ಸಹಮತಿಗಾಗಿ ಕಡತ ಕಳುಹಿಸಲಾಗಿರುತ್ತದೆ.

ಪೆರಿಫೆರಲ್ ಕ್ಯಾನ್ಸರ್ ಕೇಂದ್ರದಲ್ಲಿ ಟೆಲಿಕೋಬಾಲ್ಟ್ ಯಂತ್ರವು ಸುಸ್ಥಿತಿಯಲ್ಲಿರುತ್ತದೆ. ಉಳಿದಂತೆ ರೇಡಿಯೇಷನ್ ಅಂಕಾಲಜಿಗೆ ಸಂಬಂಧಿಸಿದ ಯಂತ್ರೋಪಕರಣಗಳನ್ನು ಖರೀದಿಸುವ ಸಂಬಂಧ ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ ಇವರ ಹಂತದಲ್ಲಿ ಕ್ರಮವಹಿಸಲಾಗುತ್ತಿದೆ.

ಆದಾಗ್ಯೂ ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ಹಾಲಿ ಶಸ್ತ್ರಚಿಕಿತ್ಸೆ ಅಗತ್ಯವಿರುವ ಕ್ಯಾನ್ಸರ್ ರೋಗಿಗಳಿಗೆ ಶಸ್ತ್ರಚಿಕಿತ್ಸೆ ಹಾಗೂ ಕಿಮೋಥೆರಪಿ ಸೌಲಭ್ಯವನ್ನು ನೀಡಲಾಗುತ್ತಿದೆ.

ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆವರಣದಲ್ಲಿರುವ ಟರ್ಷಿಯರಿ ಕ್ಯಾನ್ಸರ್ ಕೇರ್ ಕೇಂದ್ರವನ್ನು ಮೇಲ್ದರ್ಜೆಗೇರಿಸುವ ಸಂಬಂಧದ ಸಿವಿಲ್ ಕಾಮಗಾರಿಯು ಶೇಕಡ 90 ರಷ್ಟು ಭಾಗ ಪೂರ್ಣಗೊಂಡಿದ್ದು, ಸದರಿ ಕಾಮಗಾರಿಯ ಮೂಲ ಅಂದಾಜು ಮೊತ್ತವು ರೂ.1175.00 ಲಕ್ಷಗಳಿಂದ ರೂ.1740.00 ಲಕ್ಷಗಳಿಗೆ ಪರಿಷ್ಕೃತಗೊಂಡಿದ್ದು, ಈ ಪರಿಷ್ಕೃತ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತಾದ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ.

**ಸಂಖ್ಯೆ:** ಎಂಇಡಿ 312 ಎಂಪಿಎಸ್ 2023

**(ಡಾ: ಶರಣಪ್ರಕಾಶ ಆರ್. ಪಾಟೀಲ)**
ವೈದ್ಯಕೀಯ ಶಿಕ್ಷಣ ಹಾಗೂ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು.